## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ** ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮದಡಿಯಲ್ಲಿ 2021-22ನೇ ಸಾಲಿನಲ್ಲಿ ಉಳಿತಾಯವಾಗುವ ಅನುದಾನವನ್ನು ಅಲೆಮಾರಿ/ಅರೆಅಲೆಮಾರಿ ಸಮುದಾಯದವರು ಹೆಚ್ಚು ವಾಸಿಸುತ್ತಿರುವ ಜಿಲ್ಲೆಗಳಲ್ಲಿನ 09 ವಿದ್ಯಾರ್ಥಿನಿಲಯಗಳಿಗೆ ಸ್ವಂತ ಕಟ್ಟಡ ನಿರ್ಮಾಣ ಮಾಡಲು ವಿನಿಯೋಗಿಸಲು ಅನುಮತಿ ನೀಡುವ ಕುರಿತು.

**ಓದಲಾಗಿದೆ:-**

1. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಇವರ ಪ್ರಸ್ತಾವನೆ ಸಂಖ್ಯೆ:ಹಿಂವಕಇ/ಕನಿಶಾ/ಸಿಆರ್-87/2021-22, ದಿನಾಂಕ:08.03.2022.
2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂ:ಆಇ 134 ವೆಚ್ಚ 3 2022, ದಿನಾಂಕ:07.03.2022.

******

**ಪ್ರಸ್ತಾವನೆ:-**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಪ್ರಸ್ತಾವನೆಯಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ 2021-22ನೇ ಸಾಲಿನಲ್ಲಿ ಅಲೆಮಾರಿ/ಅರೆ ಅಲೆಮಾರಿ ಅಭಿವೃದ್ಧಿ ಕಾರ್ಯಕ್ರಮಗಳ ಲೆಕ್ಕಶೀರ್ಷಿಕೆ:2225-03-102-0-12 ಆಬ್ಜೆಕ್ಟೀವ್ ಕೋಡ್ 059ರಡಿಯಲ್ಲಿ ಉಳಿತಾಯವಾಗುವ ರೂ.3016.50 ಲಕ್ಷಗಳ ಅನುದಾನವನ್ನು ಅಲೆಮಾರಿ/ಅರೆಅಲೆಮಾರಿ ಸಮುದಾಯದವರು ಅತಿ ಹೆಚ್ಚು ವಾಸಿಸುತ್ತಿರುವ ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಅಲೆಮಾರಿ ಸಮುದಾಯದ ವಿದ್ಯಾರ್ಥಿಗಳಿರುವ ಬಳ್ಳಾರಿ, ಚಿತ್ರದುರ್ಗ, ಚಿಕ್ಕಮಗಳೂರು, ದಾವಣಗೆರೆ, ತುಮಕೂರು, ಕಲಬುರಗಿ, ಹಾವೇರಿ, ಯಾದಗಿರಿ, ಬೀದರ್ ಜಿಲ್ಲೆಗಳ ಜಿಲ್ಲಾ ಕೇಂದ್ರಗಳಲ್ಲಿ ಅಲೆಮಾರಿ/ಅರೆ ಅಲೆಮಾರಿ ಸಮುದಾಯದವರು ಅತಿ ಹೆಚ್ಚು ವಾಸಿಸುತ್ತಿದ್ದು, ಹಾಗೂ ಹೆಚ್ಚಿನ ಸಂಖ್ಯೆಯಲ್ಲಿ ಅಲೆಮಾರಿ ಸಮುದಾಯದ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುತ್ತಾರೆ. ಈ ಜಿಲ್ಲೆಗಳ ಜಿಲ್ಲಾ ಕೇಂದ್ರಗಳಲ್ಲಿ ಹಲವು ಹಿಂದುಳಿದ ವರ್ಗಗಳ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳು ಬಾಡಿಗೆ ಕಟ್ಟಡಗಳಲ್ಲಿ ನಿರ್ವಹಣೆಯಾಗುತ್ತಿದ್ದು, ಈ ನಿಲಯಗಳಲ್ಲಿ ಅತಿ ಹೆಚ್ಚಿನ ಸಂಖ್ಯೆಯಲ್ಲಿ ಅಲೆಮಾರಿ/ಅರೆ ಅಲೆಮಾರಿ ಸಮುದಾಯದ ವಿದ್ಯಾರ್ಥಿಗಳು ಅಭ್ಯಾಸ ಮಾಡುತ್ತಿದ್ದು, ಈ ಕಟ್ಟಡಗಳಲ್ಲಿ

16/3/22

....2

ಸ್ಥಳಾವಕಾಶದ ಕೊರತೆಯಿಂದ ವಿದ್ಯಾರ್ಥಿಗಳಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಲು ಸಾಧ್ಯವಾಗಿರುವುದಿಲ್ಲ. ಆದ್ದರಿಂದ, ಈ ಜಿಲ್ಲೆಗಳ ಜಿಲ್ಲಾ ಕೇಂದ್ರಗಳಲ್ಲಿ ಬಾಡಿಗೆ ಕಟ್ಟಡದಲ್ಲಿ ನಿರ್ವಹಣೆಯಾಗುತ್ತಿರುವ, ಹೆಚ್ಚು ಬಾಡಿಗೆ ಪಾವತಿಸಲಾಗುತ್ತಿರುವ ಹಾಗೂ ಕಟ್ಟಡ ನಿರ್ಮಾಣಕ್ಕೆ ಸೂಕ್ತ ನಿವೇಶನ ಲಭ್ಯವಿರುವ ಈ ಕೆಳಕಂಡ 9 ಮೆಟ್ರಿಕ್ ನಂತರ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳ ಕಟ್ಟಡಗಳ ನಿರ್ಮಾಣ ಕಾಮಗಾರಿಗಳನ್ನು ಕೈಗೊಳ್ಳುವುದು ಸೂಕ್ತವಾಗಿರುತ್ತದೆ. ಕಟ್ಟಡ ನಿರ್ಮಾಣ ಕಾಮಗಾರಿಗಳ ಮುಕ್ತಾಯದ ಸಮಯದಲ್ಲಿ ಈ ವಿದ್ಯಾರ್ಥಿನಿಲಯಗಳಲ್ಲಿ ಶೇ.50ಕ್ಕಿಂತ ಹೆಚ್ಚಿನ ಸ್ಥಾನಗಳನ್ನು ಸರ್ಕಾರದ ಅನುಮೋದನೆ ಪಡೆದು ಅಲೆಮಾರಿ/ಅರೆ ಅಲೆಮಾರಿ ವಿದ್ಯಾರ್ಥಿಗಳಿಗೆ ಮೀಸಲಿರಿಸಲು ಕ್ರಮವಹಿಸಲಾಗುವುದು ಮತ್ತು ಬಾಡಿಗೆ ಕಟ್ಟಡಗಳಲ್ಲಿ ನಿರ್ವಹಣೆಯಾಗುತ್ತಿರುವ ಈ ಕೆಳಕಂಡ 09 ಮೆಟ್ರಿಕ್ ನಂತರ ವಿದ್ಯಾರ್ಥಿನಿಲಯಗಳಿಗೆ ಪ್ರತಿ ವಿದ್ಯಾರ್ಥಿನಿಲಯಕ್ಕೆ ತಲಾ ರೂ.335.16 ಲಕ್ಷಗಳ ಅಂದಾಜಿನಲ್ಲಿ ಪಾರದರ್ಶಕ ನಿಯಮಗಳನ್ವಯ ಅಗತ್ಯ ಮೂಲಭೂತ ಸೌಕರ್ಯಗಳುಳ್ಳ ಸ್ವಂತ ಕಟ್ಟಡ ನಿರ್ಮಾಣ ಮಾಡಲು ಹಾಗೂ ಇವುಗಳ ನಿರ್ಮಾಣಕ್ಕೆ ನಿರ್ಮಾಣ ಏಜೆನ್ಸಿಯನ್ನು ಗೊತ್ತುಪಡಿಸಿ ಸೂಕ್ತ ಆದೇಶ ಹೊರಡಿಸಲು ಹಾಗೂ ಅನುಮತಿಸಿರುವ ಮೊತ್ತ ರೂ.3016.50 ಲಕ್ಷಗಳನ್ನು ವಿದ್ಯಾರ್ಥಿನಿಲಯ ಕಟ್ಟಡಗಳ ನಿರ್ಮಾಣಕ್ಕಾಗಿ ನಿರ್ಮಾಣ ಏಜೆನ್ಸಿಗೆ ಠೇವಣಿ ಇಡಲು ಅನುಮತಿ ನೀಡುವಂತೆ ಕೋರಿ ಪ್ರಸ್ತಾವನೆಯನ್ನು ಆಯುಕ್ತರು,ಹಿಂದುಳಿದ ವರ್ಗಗಳ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಲ್ಲಿಸಿರುತ್ತಾರೆ.

| ಕ್ರ ಸಂ. | ಜಿಲ್ಲೆ | ವಿದ್ಯಾರ್ಥಿನಿಲಯದ ವಿವರ |
|---|---|---|
| 1. | ಬಳ್ಳಾರಿ | ಮೆಟ್ರಿಕ್ ನಂತರ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಬಾಲಕಿಯರ ವಿದ್ಯಾರ್ಥಿನಿಲಯ, ಜಯನಗರ, ಬಳ್ಳಾರಿ ಟೌನ್ (ಬಿಸಿಡಬ್ಲ್ಯೂಡಿ 1664) |
| 2. | ಚಿತ್ರದುರ್ಗ | ಮೆಟ್ರಿಕ್ ನಂತರ ಇಂಜಿನಿಯರಿಂಗ್ ಮತ್ತು ಮೆಡಿಕಲ್ ಬಾಲಕಿಯರ ವಿದ್ಯಾರ್ಥಿನಿಲಯ, ಚಿತ್ರದುರ್ಗ ಟೌನ್ (ಬಿಸಿಡಬ್ಲ್ಯೂಡಿ 1825) |
| 3 | ಚಿಕ್ಕಮಗಳೂರು | ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯ (ಸಾಮಾನ್ಯ) (ವಿಭಜಿತ-01), ಚಿಕ್ಕಮಗಳೂರು ಟೌನ್ (ಬಿಸಿಡಬ್ಲ್ಯೂ 1771) |
| 4. | ದಾವಣಗೆರೆ | ಮೆಟ್ರಿಕ್ ನಂತರ ವೃತ್ತಿಪರ ಬಾಲಕಿಯರ ವಿದ್ಯಾರ್ಥಿನಿಲಯ (2), ನಿಟ್ಟುವಳ್ಳಿ, ದಾವಣಗೆರೆ ಟೌನ್ (ಬಿಸಿಡಬ್ಲ್ಯೂಡಿ 1919) |
| 5. | ತುಮಕೂರು | ಮೆಟ್ರಿಕ್ ನಂತರ ಮೆಡಿಕಲ್ ಮತ್ತು ಇಂಜಿನಿಯರಿಂಗ್ ಬಾಲಕರ ವಿದ್ಯಾರ್ಥಿನಿಲಯ, ತುಮಕೂರು ಟೌನ್ (ಬಿಸಿಡಬ್ಲ್ಯೂಡಿ 2436) |
| 6. | ಕಲಬುರಗಿ | ಮೆಟ್ರಿಕ್ ನಂತರ ಇಂಜಿನಿಯರಿಂಗ್ & ಮೆಡಿಕಲ್ ಬಾಲಕರ ವಿದ್ಯಾರ್ಥಿನಿಲಯ, ಕಲಬುರಗಿ ಟೌನ್ (ಬಿಸಿಡಬ್ಲ್ಯೂಡಿ 2094) |

...3

16/03/22